**ಸಾಕ್ಷಿಗೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆಃ ಪ್ರತಿವಾದಿ ಪರವಾಗಿ ಶ್ರೀ SPR ವಕೀಲರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು, ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿರುತ್ತೇನೆ.

**ಪಾಟೀ ಸವಾಲು ವಾದಿ ಪರವಾಗಿ ಶ್ರೀ ಬಿ.ಎಸ್. ವಕೀಲರಿಂದಃ-**

ದಾವಾ ಜಮೀನಿನ ಮೌಲ್ಯ ಪ್ರತಿ ಎಕರೆಗೆ 12 ರಿಂದ 15 ಲಕ್ಷ ಇದೆ ಎಂದು ತೋರಿಸಲು ಯಾವುದೇ ದಾಖಲೆಯನ್ನು ನ್ಯಾಯಾಲಯಕ್ಕೆ ಸಲ್ಲಿಸಿಲ್ಲ ಎಂದರೆ ಸರಿ. ದಾವಾ ಜಮೀನಿನಲ್ಲಿ ನಿವೇಶನಗಳು ಆಗಿವೆ ಎಂದು ತೋರಿಸಲು ಎನ್.ಎ. ಆದೇಶವನ್ನು ನ್ಯಾಯಾಲಯಕ್ಕೆ ಸಲ್ಲಿಸಿಲ್ಲ ಎಂದರೆ ಸರಿ. ದಾವಾ ಜಮೀನಿನ ಮೌಲ್ಯ 1 ಕೋಟಿ ಇದೆ ಎಂದು ಸುಳ್ಳು ಶಪಥ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲಾ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು,**
**ಚಿಂಚೋಳಿ**